# ಜೀವನದಲ್ಲಿ ನೈತಿಕ ಮೌಲ್ಯ ಬೆಳೆಸಿಕೊಳ್ಳಿ

## ಸಚಿವ ಡಾ. ಅಶ್ವತ್ಥ ನಾರಾಯಣ ಕಿವಿಮಾತು | ವಿದ್ಯಾರ್ಥಿಗಳಿಗೆ ಪದವಿ ಪ್ರದಾನ

■ ವಿಜಯವಾಣಿ ಸುದ್ದಿಜಾಲ ಆನೇಕಲ್

ಪದವಿ ಪಡೆದ ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ಜೀವನದಲ್ಲಿ ನೈತಿಕತೆ ಅಳವಡಿಸಿಕೊಂಡು ಸತ್ಪ್ರಜೆಗಳಾಗಿ ಸಮಾಜಕ್ಕೆ ಕೊಡುಗೆ ನೀಡಬೇಕು ಎಂದು ಸಚಿವ ಡಾ. ಸಿ.ಎನ್. ಅಶ್ವತ್ಥ ನಾರಾಯಣ ತಿಳಿಸಿದರು.

ಪಟ್ಟಣಕ್ಕೆ ಸಮೀಪದ ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ಶನಿವಾರ ಆಯೋಜಿಸಿದ್ದ ಪದವಿ ಪ್ರದಾನ ಕಾರ್ಯಕ್ರಮದಲ್ಲಿ ಮಾತನಾಡಿದರು. 21ನೇ ಶತಮಾನ ಜ್ಞಾನದ ಯುಗವಾಗಿದ್ದು, ಜ್ಞಾನದಿಂದ ಎಲ್ಲವನ್ನು ಸಾಧಿಸಬಹುದಾಗಿದೆ. ಅವಕಾಶ ಬಳಸಿಕೊಂಡು ಉನ್ನತ ಸಾಧನೆ ಮಾಡಲು ಗಮನ ಹರಿಸಬೇಕು. ಪ್ರತಿಯೊಬ್ಬರೂ ಶಕ್ತಿ ಮತ್ತು ದೌರ್ಬಲ್ಯಗಳ ಬಗ್ಗೆ ಗಮನ ಹರಿಸಿ ದೌರ್ಬಲ್ಯ ಕಡಿಮೆ ಮಾಡಿಕೊಂಡು ದೊರೆಯುವ ಅವಕಾಶ ಸದ್ಬಳಕೆ ಮಾಡಿಕೊಳ್ಳಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಶೈಕ್ಷಣಿಕ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿವೆ. ಟೆಕ್ ಸಮ್ಮಿತ್, ಸ್ಕಿಲ್ ಕನೆಕ್ಟ್ ಮೂಲಕ ಕೌಶಲ ಅಭಿವೃದ್ಧಿ ಪಡೆಯಲು ಅನುಕೂಲ ಕಲ್ಪಿಸಿದೆ ಎಂದರು.

ಅಲೆನ್ಸ್ ವಿವಿ 25ವರ್ಷ ಪೂರೈಸಿದ ಸಂದರ್ಭದಲ್ಲಿ ರಾಜ್ಯದ ಹಾಗೂ ಹೊರ ರಾಜ್ಯದಿಂದ ಬಂದು ಸಾಕಷ್ಟು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಹಲವು ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿದ್ದು, ವಿದ್ಯಾರ್ಥಿಗಳು ಜವಾಬ್ದಾರಿಯನ್ನು ಅರಿತು ಅಭ್ಯಾಸದ ಕಡೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಸಲಹೆ ನೀಡಿದರು.

ಅಲಯನ್ಸ್ ವಿಶ್ವವಿದ್ಯಾಲಯದ ಸಹ ಕುಲಪತಿ ಅಭಯ್ ಛೆಬ್ಬಿ ಮಾತನಾಡಿ, ಗುಣಮಟ್ಟದ ಶಿಕ್ಷಣ ನೀಡಬೇಕು ಎಂಬುದು ನಮ್ಮ ಗುರಿ. ಈ ನಿಟ್ಟಿನಲ್ಲಿ 25 ವರ್ಷಗಳಿಂದ ವಿಶ್ವಮಟ್ಟದ ಗುಣಾತ್ಮಕ ಶಿಕ್ಷಣ ನೀಡಲಾಗುತ್ತಿದೆ ಎಂದರು.

ರಾಜ್ಯ ಕಾನೂನು ಪ್ರಾಧಿಕಾರದ ಅಧ್ಯಕ್ಷ ಜಸ್ಟೀಸ್ ಎಸ್.ಆರ್.ಬನ್ನೂರ ಮಠ್ ಮಾತನಾಡಿ, ಶಿಕ್ಷಣ ಎಂದರೆ ಹರಿಯುವ ನೀರು. ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ಇತರ ವಿಭಾಗಗಳಲ್ಲಿಯೂ ತೊಡಗಿಸಿಕೊಳ್ಳಬೇಕು. ಪದವಿ ಪಡೆದವರು ಮುಂದಿನ ದಿನಗಳಲ್ಲಿ ಒಳ್ಳೆಯ ಹುದ್ದೆಗಳನ್ನು ಪಡೆದು ಸಮಾಜದಲ್ಲಿ ಗೌರವ ಹಾಗೂ ದೇಶಕ್ಕೆ ಒಳ್ಳೆಯ ವ್ಯಕ್ತಿ ಆಗಬೇಕು ಎಂದರು. ಎಂಬಿಎ, ಎಲ್‌ಎಲ್‌ಬಿ, ಬಿ.ಟೆಕ್, ಪಿಎಚ್‌ಡಿ ಪೂರೈಸಿದ ಸುಮಾರು 2000 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. 20 ಮಂದಿ ವಿದ್ಯಾರ್ಥಿಗಳು ಚಿನ್ನದ ಪದಕಕ್ಕೆ ಭಾಜನರಾದರು.

ಚಿತ್ರ: ಹುಸ್ಕೂರು ಡಿ.ಜಿ



ಆನೇಕಲ್ ಸಮೀಪದ ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ಶನಿವಾರ ಆಯೋಜಿಸಿದ್ದ ಪದವಿ ಪ್ರದಾನ ಕಾರ್ಯಕ್ರಮದಲ್ಲಿ ಸಚಿವ ಸಿ.ಎನ್ ಅಶ್ವತ್ಥ ನಾರಾಯಣ ಅವರು ವಿದ್ಯಾರ್ಥಿನಿ ಅಕ್ಷತಾ ಅವರಿಗೆ ಚಿನ್ನದ ಪದಕ ಪ್ರದಾನ ಮಾಡಿದರು. ಉದ್ಯಮಿ ಹರ್ಷಿತ್ ಸಿಂಘಾಲ್, ಕುಲಪತಿ ಪ್ರೇಮಾನಂದ್ ಶೆಟ್ಟಿ, ಸಿಬ್ಬಂದಿ ಅನುಬಾ ಸಿಂಗ್, ಡಾ.ಪುನೀತ್ ಕರಿಯಪ್ಪ, ಸುರೇಖಾ ಶೆಟ್ಟಿ, ಬಿಜೆಪಿ ಮುಖಂಡ ತಿಲಕ್ ಗೌಡ ಇದ್ದರು.

# ಸ್ಯಾಂಟ್ರೋ ರವಿ ಪ್ರಕರಣದಲ್ಲಿ ನಿಷ್ಪಕ್ಷಪಾತ ತನಿಖೆ

**ಆನೇಕಲ್:** ಸ್ಯಾಂಟ್ರೋ ರವಿಯನ್ನು ಬಂಧಿಸಲಾಗಿದ್ದು, ನಿಷ್ಪಕ್ಷಪಾತ ತನಿಖೆ ನಡೆಯಲಿದೆ ಎಂದು ಸಚಿವ ಸಿ.ಎನ್. ಅಶ್ವತ್ಥ ನಾರಾಯಣ ಹೇಳಿದರು.

ಪಟ್ಟಣದ ಅಲಯನ್ಸ್ ಯೂನಿವರ್ಸಿಟಿಯಲ್ಲಿ ಶನಿವಾರ ಆಯೋಜಿಸಿದ್ದ ಪದವಿ ಪ್ರದಾನ ಸಮಾರಂಭದ ಬಳಿಕ ಮಾತನಾಡಿದ ಅವರು, ನಮ್ಮ ಗೃಹ ಸಚಿವರಷ್ಟು ಪ್ರಾಮಾಣಿಕರು ಯಾರೂ ಇಲ್ಲ. ಆದರೂ ಅವರ ಮೇಲೆ ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ. ಅವರು ಎಲ್ಲ ವಿಚಾರದಲ್ಲಿಯೂ ಮುಕ್ತ ತನಿಖೆ ಮಾಡಿಸಿದ್ದಾರೆ. ದಲ್ಲಾಳಿಗಳು ನಮ್ಮ ಗೃಹಸಚಿವರಿಗೆ ಬೇಕಿಲ್ಲ. ಕಾಂಗ್ರೆಸ್‌ನಂತೆ ನಮ್ಮ ಪಕ್ಷದಲ್ಲಿ ಇಂತಹ ಘಟನೆಗಳು ನಡೆಯುವುದಿಲ್ಲ ಎಂದರು.

2ಎ ಸೇರ್ಪಡೆಗೆ ಪಂಚಮಸಾಲಿ ಸಮಾಜದ ಬಸವಜಯ ಮೃತ್ಯುಂಜಯ ಸ್ವಾಮೀಜಿ ನಡೆಸುತ್ತಿರುವ ಹೋರಾಟದ ವಿಷಯಕ್ಕೆ ಪ್ರತಿಕ್ರಿಯಿಸಿದ ಸಚಿವರು, ಸ್ವಾಮೀಜಿಗಳಿಗೆ ಅಪೇಕ್ಷೆ ಹಾಗೂ ಒತ್ತಡ ಎರಡೂ ಇರುವುದರಿಂದ ಹೋರಾಟಕ್ಕೆ ಮುಂದಾಗಿದ್ದಾರೆ. ವಿವಿಧ ಸಮುದಾಯಗಳು ಮೀಸಲಾತಿಗಾಗಿ ಹೋರಾಟ ಮಾಡುತ್ತಿವೆ. ಸರ್ಕಾರ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳಲಿದೆ. ಎಲ್ಲರ ಬೇಡಿಕೆ ಈಡೇರಿಕೆಗೆ ಶ್ರಮಿಸಲಿದೆ. ಇದರಲ್ಲಿ ಗೊಂದಲವಿಲ್ಲ ಎಂದರು.

### ಸಿಪಿ ಯೋಗೇಶ್ವರ್ ಹೇಳಿಕೆ ಸತ್ಯಾಸತ್ಯತೆ ಗೊತ್ತಿಲ್ಲ

**ಯೋಗೇಶ್ವರ್ ಅವರ ಆಡಿಯೋ ವೈರಲ್ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿದ ಸಚಿವರು, ಸತ್ಯಾಸತ್ಯತೆ ಗೊತ್ತಿಲ್ಲ. ಅದನ್ನು ವೈಭವೀಕರಿಸುವ ಅವಶ್ಯಕತೆಯಿಲ್ಲ. ಅವರು ಸಾಮಾನ್ಯವಾಗಿ ಮಾತನಾಡಿದ್ದಾರೆ. ಅದನ್ನು ಯಾರೋ ಆಡಿಯೋ ಮಾಡಿ ಹರಿಬಿಟ್ಟಿರಬಹುದು. ಇದನ್ನು ಗಂಭೀರವಾಗಿ ಪರಿಗಣಿಸುವ ಅವಶ್ಯಕತೆಯಿಲ್ಲ. ನಮ್ಮದು ಶಿಸ್ತಿನ ಪಕ್ಷ. ಅವರು ತಮ್ಮ ಆಲೋಚನೆ ವ್ಯಕ್ತಪಡಿಸಿದ್ದಾರೆ ಎಂದರು.**

ಮುರುಗೇಶ್ ನಿರಾಣಿ ಹಾಗೂ ಯತ್ನಾಳ್ ನಡುವೆ ಮಾತಿನ ಸಮರ ನಡೆದಿದೆ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಸಚಿವರು, ಯಾರು ಎಲ್ಲಿ ಏನು ಮಾತಾಡಬೇಕು ಅದನ್ನು ಮಾತ್ರ ಮಾತನಾಡಬೇಕು. ನಾವು ರಾಜಕಾರಣಿಗಳಾಗಿದ್ದು ಸಾರ್ವಜನಿಕ ಸ್ಥಳಗಳಲ್ಲಿ ಎಚ್ಚರಿಕೆಯಿಂದ ಮಾತನಾಡಬೇಕು. ಬಿಜೆಪಿ ಕಾರ್ಯಕರ್ತರ ಆಧಾರಿತವಾಗಿರುವ ಪಕ್ಷ. ನಾಯಕರಿಂದ ಇರುವ ಪಕ್ಷ ನಮ್ಮದಲ್ಲ. ಇದನ್ನು ಅವರಿಬ್ಬರೂ ಅರ್ಥ ಮಾಡಿಕೊಳ್ಳಬೇಕು ಎಂದರು.